# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2352 |
| ಸದಸ್ಯರ ಹೆಸರು | : | ಶ್ರೀ ಪಿ.ಹೆಚ್ ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 27.03.2026 |
| ಉತ್ತರಿಸುವ ಸಚಿವರು | : | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 2017-18ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಉತ್ತರ ಕರ್ನಾಟಕದ ಭಾಗದಲ್ಲಿ ದೊಡ್ಡಾಟ ಮತ್ತು ಸಣ್ಣಾಟ, ಸುತ್ತುಗೊಂಬೆ ಹಾಗೂ ತೊಗಲು ಗೊಂಬೆಯಂತಹ ಜನಪದ ಕಲೆಗಳಲ್ಲಿ ತೊಡಗಿಸಿಕೊಂಡ ಕಲಾವಿದರ ಅನುಕೂಲದ ದೃಷ್ಟಿಯಿಂದ ಕರ್ನಾಟಕ ಬಯಲಾಟ ಅಕಾಡೆಮಿಯನ್ನು ಬಾಗಲಕೋಟೆಯಲ್ಲಿ ಸ್ಥಾಪಿಸಲು ತೀರ್ಮಾನಿಸಲಾಗಿದ್ದು, ಆದರೆ ಇಲ್ಲಿಯವರೆಗೂ ಸದರಿ ಅಕಾಡೆಮಿಗೆ ಸ್ವಂತ ಕಚೇರಿ ಗುರುತಿಸದೇ ಅಧಿಕಾರಿಗಳು, ಸಿಬ್ಬಂದಿಗಳನ್ನು ನೇಮಿಸದೇ ಇರುವ ಕಾರಣದಿಂದಾಗಿ ಕಲಾವಿದರು ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ಪರದಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; | ಗಮನಕ್ಕೆ ಬಂದಿದೆ.<br><br>2018ನೇ ಸಾಲಿನಲ್ಲಿ ಕರ್ನಾಟಕ ಬಯಲಾಟ ಅಕಾಡೆಮಿಯನ್ನು ಬಾಗಲಕೋಟೆಯಲ್ಲಿ ಸ್ಥಾಪಿಸಲಾಗಿದೆ.<br><br>ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ಗ್ರೂಪ್-ಬಿ ವೃಂದದ 47 ಹುದ್ದೆಗಳು ಮಂಜೂರಾಗಿದ್ದು, ಮಂಜೂರಾದ ಹುದ್ದೆಗಳಲ್ಲಿ ಪ್ರಸ್ತುತ 20 ಜನ ಅಧಿಕಾರಿಗಳು ಮಾತ್ರ ಕಾರ್ಯ ನಿರ್ವಹಿಸುತ್ತಿದ್ದಾರೆ. ಇಲಾಖೆಯಲ್ಲಿ ಗ್ರೂಪ್-ಬಿ ಅಧಿಕಾರಿಗಳ ಕೊರತೆ ಇರುತ್ತದೆ.<br><br>ಸದರಿ ಅಕಾಡೆಮಿಯ, ರಿಜಿಸ್ಟ್ರಾರ್ ಹುದ್ದೆಯು ಗ್ರೂಪ್-'ಬಿ' ವೃಂದದ ಹುದ್ದೆಯಾಗಿರುತ್ತದೆ. ಪ್ರಸ್ತುತ ಜಿಲ್ಲಾಡಳಿತದಿಂದ ಸದರಿ ಅಕಾಡೆಮಿಯ ರಿಜಿಸ್ಟ್ರಾರ್ ಆಗಿ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬಾಗಲಕೋಟೆ ಇವರನ್ನು ನಿಯೋಜಿಸಲಾಗಿದೆ.<br><br>ಅಕಾಡೆಮಿಯಲ್ಲಿ ಪ್ರಥಮ ದರ್ಜೆ ಸಹಾಯಕರ ಹುದ್ದೆಯಲ್ಲಿ ಇಲಾಖೆಯ ಖಾಯಂ ಸಿಬ್ಬಂದಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.<br><br>ಅಕಾಡೆಮಿಗೆ ಮಂಜೂರಾದ ಬೆರಳಚ್ಚುಗಾರರು ಮತ್ತು ದಲಾಯಿತ ಹುದ್ದೆಗಳಿಗೆ ನಿಯಮಾನುಸಾರ ಹೊರಗುತ್ತಿಗೆ ಮೂಲಕ ಸಿಬ್ಬಂದಿಗಳನ್ನು ಪಡೆದು ಕಾರ್ಯ ನಿರ್ವಹಿಸಲಾಗುತ್ತಿದೆ. |

| | | |
|---|---|---|
| (ಆ) | ಬಂದಿದ್ದಲ್ಲಿ, ಬಾಗಲಕೋಟೆಯಲ್ಲಿ ಕರ್ನಾಟಕ ಬಯಲಾಟ ಅಕಾಡೆಮಿಯ ಕೇಂದ್ರ ಕಚೇರಿಯನ್ನು ಸ್ಥಾಪಿಸಿ, ಪೂರ್ಣ ಪ್ರಮಾಣ ಸಿಬ್ಬಂದಿಗಳನ್ನು ನಿಯೋಜಿಸಲಾಗುವುದೇ; ನಿಯೋಜಿಸಲು ಯಾವಾಗ ಕ್ರಮ ಕೈಗೊಳ್ಳಲಾಗುವುದು? | ಕರ್ನಾಟಕ ಬಯಲಾಟ ಅಕಾಡೆಮಿಯು ಬಾಗಲಕೋಟೆಯ ಜಿಲ್ಲಾ ಕೇಂದ್ರದಲ್ಲಿ, ಕರ್ನಾಟಕ ಸರ್ಕಾರದ ಪುನರ್ ವಸತಿ ಪುನರ್ ನಿರ್ಮಾಣ ಕೃಷ್ಣಾ ಮೇಲ್ದಂಡೆ ಯೋಜನೆ ಕಚೇರಿಯ ಕಲಾಭವನ ಸಂಕೀರ್ಣದಲ್ಲಿ ಕಾರ್ಯನಿರ್ವಹಿಸುತ್ತಿದೆ.<br><br>ಸರ್ಕಾರದ ಪತ್ರ ಸಂಖ್ಯೆ: ಕಸಂವಾ 118 ಕಸನಿ ಆಕ 2022, ದಿನಾಂಕ:20.07.2024ರಲ್ಲಿ ಖಾಲಿ ಇರುವ 13 ಹುದ್ದೆಗಳಿಗೆ ಪ್ರತಿಯಾಗಿ, 06 ಗ್ರೂಪ್ "ಬಿ" ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆರ್ಥಿಕ ಇಲಾಖೆಯಿಂದ ಅನುಮತಿ ನೀಡಲಾಗಿದೆ.<br><br>ಸಿಬ್ಬಂದಿ ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ಆಯ್ಕೆ ಪ್ರಕ್ರಿಯೆ ಅಂತಿಮವಾದ ನಂತರ ಸಿಬ್ಬಂದಿಯನ್ನು ನಿಯೋಜಿಸಲು ಕ್ರಮ ವಹಿಸಲಾಗುವುದು. |

ಸಂಖ್ಯೆ: ಕಸಂವಾ 38 ಕೆಬಿಎಲ್ ಆಕ 2026

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು